# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 04.10.2011

## *ನಗರ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಲು ಪಾಲಿಕೆ ಮನವಿ*

ನಗರಾದ್ಯಂತ ಆಯುಧ ಪೂಜೆ ಮತ್ತು ವಿಜಯದಶಮಿ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸುತ್ತಿರುವ ಸಂದರ್ಭದಲ್ಲಿ ಸಾರ್ವಜನಿಕರು ನಗರದ ಸ್ವಚ್ಛತೆ ಮತ್ತು ಸೌಂದರ್ಯವನ್ನು ಕಾಪಾಡಿಕೊಂಡು ಬರುವಂತೆ ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಮನವಿ ಮಾಡಿದ್ದಾರೆ.

ಸಾರ್ವಜನಿಕರು ಹಬ್ಬದ ದಿನಗಳಲ್ಲಿ ಪಾದಚಾರಿ ಮಾರ್ಗಗಳ ಮೇಲೆ ಪೂಜೆ ಮತ್ತು ಇತರೆ ಸಾಮಗ್ರಿಗಳನ್ನು ಮಾರಾಟ ಮಾಡುವುದು, ತಿಂಡಿ, ತಿನಿಸುಗಳ ಮಾರಾಟ ಮಳಿಗೆಗಳನ್ನು ಇಡುವುದು, ಮಾರಾಟ ಮಾಡಿ ಉಳಿದ ತ್ಯಾಜ್ಯ ವಸ್ತುಗಳನ್ನು ರಸ್ತೆಯ ಮೇಲೆ ಹಾಕುವುದು, ಅನಧಿಕೃತವಾಗಿ ರಸ್ತೆಗಳನ್ನು ಅಗೆದು ಕಮಾನುಗಳನ್ನು ನಿರ್ಮಿಸುವುದು, ಬ್ಯಾನರ್‌ಗಳನ್ನು ಹಾಕುವುದು, ವಾಹನಗಳು, ಹೋಟೆಲ್ ಮತ್ತು ಮನೆಗಳನ್ನು ತೊಳೆಯುವಾಗ ಕೊಳೆ ನೀರನ್ನು ರಸ್ತೆ ಮೇಲೆ ಬಿಡುವುದು, ಹೀಗೆ ಮುಂತಾದ ಚಟುವಟಿಕೆಗಳನ್ನು ಕೈಗೊಳ್ಳುವುದರಿಂದ ನಗರದ ಸೌಂದರ್ಯಕ್ಕೆ ಧಕ್ಕೆ ಬರುತ್ತದೆ. ಇದರಿಂದ ನಗರದ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಲು ಕಷ್ಟಕರವಾಗುತ್ತದೆ. ಸಾರ್ವಜನಿಕರು ಈ ಮೇಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಹಬ್ಬವನ್ನು ಸಂಭ್ರಮದಿಂದ ಆಚರಿಸುವುದರ ಜೊತೆಗೆ ನಗರ ನೈರ್ಮಲ್ಯ ಕಾಪಾಡಲು ಪಾಲಿಕೆಯೊಂದಿಗೆ ಸಹಕರಿಸಬೇಕಾಗಿ ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ಅವರು ತಿಳಿಸಿದ್ದಾರೆ.

- ರಸ್ತೆ ಬದಿ ವ್ಯಾಪಾರಿಗಳು ಪೂಜೆ ಮತ್ತು ಅಲಂಕಾರದ ಸಾಮಗ್ರಿಗಳನ್ನು ಮಾರಾಟ ಮಾಡಿದ ನಂತರ ಉಳಿದ ಸಾಮಗ್ರಿಗಳನ್ನು ಕಡ್ಡಾಯವಾಗಿ ಕಸ ವಿಲೇವಾರಿ ಮಾಡುವ ಕೇಂದ್ರಗಳಿಗೆ ಸಾಗಿಸಬೇಕು.
- ಸಾರ್ವಜನಿಕರು ಹಬ್ಬದ ಮರುದಿನ ಪೂಜೆ ಸಾಮಗ್ರಿಗಳನ್ನು ಒಂದೆಡೆ ಸಂಗ್ರಹಿಸಿ ತಳ್ಳುವ ಗಾಡಿಗಳಿಗೆ ನೀಡಬೇಕು.
- ಹಬ್ಬದ ದಿನಗಳಲ್ಲಿ ಪ್ರತಿನಿತ್ಯ ನಗರದಲ್ಲಿ ಉತ್ಪತ್ತಿಯಾಗುವ ತ್ಯಾಜ್ಯಗಿಂತ ಹೆಚ್ಚಿನ ಪ್ರಮಾಣದಲ್ಲಿ ತ್ಯಾಜ್ಯ ಉತ್ಪತ್ತಿಯಾಗುವುದರಿಂದ ಅದನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡುವಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಪರಿಸರ ಅಭಿಯಂತರರುಗಳಿಗೆ ಆಯುಕ್ತರು ಸೂಚನೆ ನೀಡಿದ್ದಾರೆ. ಆದ್ದರಿಂದ ಸಾರ್ವಜನಿಕರು ತಮ್ಮ ಮನೆಯಲ್ಲಿ ಸಂಗ್ರಹವಾದ ಕಸವನ್ನು ತಳ್ಳುವಗಾಡಿಗಳಿಗೆ ನೀಡಿ, ನಗರದ ಸ್ವಚ್ಛತೆ ಕಾಪಾಡಿಕೊಂಡು ಬರುವಂತೆ ಸಹಕರಿಸಲು ಮನವಿ ಮಾಡಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**